	ರಾಜ್ಯ ಆಯವ್ಯಯದಲ್ಲಿ ಸರ್ಕಾರಿ ಕಟ್ಟಡಗಳ ನಿರ್ಮಾಣಕ್ಕಾಗಿ ನಿಗದಿಪಡಿಸಿರುವ ಮೊತ್ತ ಲಕ್ಷ ರೂ.ಗಳು	ಕಟ್ಟಡಗಳ ಸಂಖ್ಯೆ
1. ಪರಿಶಿಷ್ಟ ಜಾತಿ ಬಾಲಕರ: ಬಾಲಕಿಯರ ವಿದ್ಯಾರ್ಥಿ ನಿಲಯಗಳಿಗಾಗಿ	320.00	27
	ಜಿಲ್ಲಾವಲಯದ ಆಯವ್ಯಯದಲ್ಲಿ ಸರ್ಕಾರಿ ಕಟ್ಟಡ ನಿರ್ಮಾಣಕ್ಕೆ	
1. ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳ ಬಾಲಕರ ವಿದ್ಯಾರ್ಥಿನಿಲಯಗಳಿಗಾಗಿ.	137.36	34
2. ಪರಿಶಿಷ್ಟ ವರ್ಗಗಳ ಬಾಲಕಿಯರ ವಿದ್ಯಾರ್ಥಿನಿಲಯಗಳಿಗಾಗಿ.	143.50	18
3. ರಾಜ್ಯ ಆಯವ್ಯಯದಲ್ಲಿ ಖಾಸಗಿ ಸಂಸ್ಥೆಯವರು ನಡೆಸುತ್ತಿರುವ ಅನುದಾನಿತ ವಿದ್ಯಾರ್ಥಿನಿಲಯಗಳ ಕಟ್ಟಡ ನಿರ್ಮಾಣಕ್ಕೆ ಧನಸಹಾಯಕ್ಕೆ. ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳ ವಿದ್ಯಾರ್ಥಿ ನಿಲಯಗಳಿಗಾಗಿ.	20.00	6

ಆ. 1992–93ನೇ ಸಾಲಿನಲ್ಲಿ 54.05ಲಕ್ಷ ರೂ.ಗಳನ್ನು (ಜಿಲ್ಲಾವಲಯದಲ್ಲಿ) ನಿಗದಿಪಡಿಸಿರುತ್ತದೆ.

ಬೆಂಗಳೂರು ಮಹಾನಗರ ಪಾಲಿಕೆಯಲ್ಲಿನ ಎರವಲು ಸೇವೆಯಲ್ಲಿರುವ ಅಧಿಕಾರಿಗಳನ್ನು ಕೆಲಸದಿಂದ ವಿಮುಕ್ತಿಗೊಳಿಸಿರುವುದರ ಬಗ್ಗೆ

895: ಶ್ರೀ ಟಿ.ಬಿ. ಜಯಚಂದ್ರ (ಕಳ್ಳಂಬೆಳ್ಳ):– ಮಾನ್ಯ ನಗರಾಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ. ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ಲೋಕೋಪಯೋಗಿ ಇಲಾಖೆಯಿಂದ ಎರವಲು ಸೇವೆ ಆಧಾರದ ಮೇಲೆ ಕಾರ್ಯ ನಿರ್ವಹಿಸುತ್ತಿದ್ದ 24ಜನ ಸಹಾಯಕ ಅಭಿಯಂತರರನ್ನು ಕೆಲಸದಿಂದ ವಿಮುಕ್ತಿಗೊಳಿಸಿರುವುದು ಸರ್ಕಾರಕ್ಕೆ ತಿಳಿದಿದೆಯೇ;

ಆ. ಸರ್ಕಾರಿ ನೌಕರರ ವರ್ಗಾವಣೆ ಸೂಚನೆಗಳ ವಿರುದ್ಧವಾಗಿ ಈ ನೌಕರರನ್ನು ಮಧ್ಯಂತರದಲ್ಲಿ ಕೆಲಸದಿಂದ ವಿಮುಕ್ತಿಗೊಳಿಸುವಂತಹ ಅವಸರವೇನಿತ್ತು;

ಇ. ಕೆಲಸದಿಂದ ವಿಮುಕ್ತಿಗೊಳಿಸಿದ ನೌಕರರು ಮರು ನೇಮಕಾತಿ ಇಲ್ಲದೆ ತೊಂದರೆ ಅನುಭವಿಸುತ್ತಿರುವದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಈ. ಹಾಗಿದ್ದಲ್ಲಿ ಸರ್ಕಾರವು ಕೈಗೊಂಡ ಕ್ರಮಗಳೇನು ?

ಶ್ರೀ ಚೌಡರೆಡ್ಡಿ (ನಗರಾಭಿವೃದ್ಧಿ ಸಚಿವರು):–

ಅ. ಹೌದು.

ಆ. ಎರವಲು ಕೋಟಾಗಿಂತ ಹೆಚ್ಚಿನ ಅಭಿಯಂತರರನ್ನು ನೇಮಕ ಮಾಡಲಾಗಿತ್ತು.

ಇ. ಹೌದು.

ಈ. ನೇಮಕಾತಿ ಮಾಡಲು ಲೋಕೋಪಯೋಗಿ ಇಲಾಖೆಯನ್ನು ಕೋರಲಾಗಿದೆ.

ಮಂಗಳೂರು ಐ.ಟಿ.ಐ.ನಲ್ಲಿ ಸ್ಥಾನ ಹೆಚ್ಚಿಸುವ ಕುರಿತು

1114: ಶ್ರೀ ವಿಜಯಕುಮಾರ್ ಶೆಟ್ಟಿ (ಸುರತ್ಕಲ್):– ಮಾನ್ಯ ಕಾರ್ಮಿಕ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ. ಮಂಗಳೂರು ಐ.ಟಿ.ಐ.ನಲ್ಲಿ ವಿವಿಧ ಅಧ್ಯಯನ ಶಾಖೆಗಳಲ್ಲಿ ವಿದ್ಯಾರ್ಥಿಗಳ ಸಂಖ್ಯೆಯನ್ನು ಹೆಚ್ಚಿಸಲು ಸರ್ಕಾರ ಉದ್ದೇಶಿಸಿದೆಯೇ;

ಆ. ಮಂಗಳೂರಿನಲ್ಲಿ ಬಾಲಕಿಯರ ಐ.ಟಿ.ಐ. ಸ್ಥಾಪಿಸಲು ಸರ್ಕಾರ ಉದ್ದೇಶಿಸಿದೆಯೇ;

ಇ. ಮಂಗಳೂರು ಐ.ಟಿ.ಐ.ನ ಕಟ್ಟಡ ವಿಸ್ತರಣೆಗಾಗಿ ಸರ್ಕಾರ ಕ್ರಮ ಕೈಗೊಳ್ಳುವುದೇ ?

ಶ್ರೀ ಬ್ಲೇಸಿಯಸ್ ಎಂ. ಡಿಸೋಜ (ಕಾರ್ಮಿಕ ಸಚಿವರು):–

ಅ. ಇಲ್ಲ.

ಆ. ಸದ್ಯಕ್ಕೆ ಇಲ್ಲ.

ಇ. ಸದ್ಯಕ್ಕೆ ಇಲ್ಲ.

ಬೆಂಗಳೂರು ಮಹಾನಗರ ಪಾಲಿಕೆಗೆ ಸೇರಿದ ಆಸ್ತಿಯಾದ ಶಿವಾಜಿನಗರ ಸ್ಟೇಡಿಯಂನ್ನು ಮಹಾನಗರ ಪಾಲಿಕೆಯು ಮಾರಾಟ ಮಾಡುವ ಬಗ್ಗೆ

1138: ಶ್ರೀ ಎ.ಕೆ. ಅನಂತಕೃಷ್ಣ (ಶಿವಾಜಿನಗರ):– ಮಾನ್ಯ ನಗರಾಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ. ಬೆಂಗಳೂರು ಮಹಾನಗರ ಪಾಲಿಕೆಗೆ ಸೇರಿದ ಆಸ್ತಿಯಾದ ಶಿವಾಜಿನಗರ ಸ್ಟೇಡಿಯಂನ್ನು ಮಹಾನಗರ ಪಾಲಿಕೆಯು ಮಾರಾಟ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ. ಸಾರ್ವಜನಿಕ ಹಿತದೃಷ್ಟಿಯಿಂದ ಇಂತಹ ಉದ್ದೇಶ ಪೂರ್ವಕವಾಗಿ ಸರ್ಕಾರದ ಆದೇಶಗಳನ್ನು ಉಲ್ಲಂಘಿಸುತ್ತಿರುವುದನ್ನು ರದ್ದುಗೊಳಿಸುವಲ್ಲಿ ಸರ್ಕಾರವು ತೆಗೆದುಕೊಂಡಿರುವ ಕ್ರಮವೇನು;

ಇ. ಸರ್ಕಾರದ ಆದೇಶಗಳನ್ನು ಉಲ್ಲಂಘಿಸಿದ ಅಧಿಕಾರಿಗಳು, ನೌಕರರ ವಿರುದ್ಧ ಸರ್ಕಾರವು ತೆಗೆದುಕೊಂಡ ಕ್ರಮ ?

ಶ್ರೀ ಚೌಡರೆಡ್ಡಿ (ನಗರಾಭಿವೃದ್ಧಿ ಸಚಿವರು):–

ಅ. ಇಲ್ಲ.

ಆ. ಉದ್ಭವಿಸುವುದಿಲ್ಲ.

ಇ. ಉದ್ಭವಿಸುವುದಿಲ್ಲ.